**ಸಿ.ಸಿಃ 4462/2022**

**ಫ್ರಾಸಾಃ 01 ಚಾಸಾಃ 02**

**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 4462/2022**

| | | |
|---|---|---|
| ಸಾಕ್ಷಿದಾರರ ಹೆಸರು | ಕುಮಾರ | ಫ್ರಾಸಾಃ 1 |
| ತಂದೆಯ/ಗಂಡನ ಹೆಸರು | ಮಾದೇಗೌಡ | ಚಾಸಾಃ 2 |
| ವಯಸ್ಸು | 35 ವರ್ಷ | |
| ಕೆಲಸ | ವ್ಯವಸಾಯ | ಸಾ ಪ್ರ ಬೋ |
| ವಾಸ | ಬಿಳಿಗೆರೆ | ದಿಃ 23.06.2025 |

**ಮುಖ್ಯ ವಿಚಾರಣೆ ಫ್ರಾಷ್ಟ ಸ.ಸ.ಅ ರವರಿಂದಃ**

ನನಗೆ ಈ ಪ್ರಕರಣದ ವಿಚಾರ ತಿಳಿದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಅಮಾನತು ಪಡಿಸಿಕೊಂಡಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಸಾಕ್ಷಿ ಮಹಜರ್ ನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ. 1 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 1(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿ.ಪಿ. 2 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಫ್ರಾಷ್ಟ ಸ.ಸ.ಅ ರವರಿಂದಃ**

ದಿನಾಂಕ 26.01.2011 ರಂದು ಸಮಯ ಬೆಳಿಗ್ಗೆ 10.30 ಗಂಟೆಯಲ್ಲಿ ನಾನು ಮತ್ತು ಚಾಸಾ 3 ರವರು ಸರಗೂರು ಗ್ರಾಮದ ಬಸ್ ನಿಲ್ದಾಣದ ಬಳಿ ಇರುವಾಗ ಪೊಲೀಸರು ಬಂದು ಈ ಪ್ರಕರಣದ ವಿಚಾರವನ್ನು ತಿಳಿಸಿ ಮಹಜರ್ ಗೆ ಸಹಕರಿಸುವಂತೆ ಕೇಳಿಕೊಂಡಿದ್ದು, ಅದಕ್ಕೆ ನಾವು ಒಪ್ಪಿ ಪೊಲೀಸರೊಂದಿಗೆ

ಇಲಾಖಾ ಜೀಪ್ ಸಂಖ್ಯೆಕೆ ಎ 03 ಜಿ 9141 ನಲ್ಲಿ ಕೃತ್ಯ ಸ್ಥಳಕ್ಕೆ ಬೆಳಿಗ್ಗೆ 11 ಗಂಟೆಗೆ ಹೋಗಿದ್ದು, ಅಲ್ಲಿ ಒಬ್ಬ ವ್ಯಕ್ತಿ ಕೈಯಲ್ಲಿ ಬಿಳಿ ಪ್ಲಾಸ್ಟಿಕ್ ಚೀಲ ಇಟ್ಟುಕೊಂಡು ಬಂದಿದ್ದು ಕಂಡು ಬಂದು ಪೊಲೀಸರು ನಮ್ಮ ಸಮಕ್ಷಮ ಪ್ಲಾಸ್ಟಿಕ್ ಚೀಲವನ್ನು ಪರಿಶೀಲಿಸಲಾಗಿ ಅದರಲ್ಲಿ 180 ಎಂ.ಎಲ್ ನ 20 ಓಲ್ಡ್ ಅಡ್ಮಿರಲ್ ವಿ.ಎಸ್.ಓ.ಪಿ ಬ್ರ್ಯಾಂಡಿ ಪೌಚ್ ಗಳು ಇದ್ದು, ಅದನ್ನು ನಮ್ಮ ಸಮಕ್ಷಮ ಅಮಾನತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅವುಗಳನ್ನು ರಾಸಾಯನಿಕ ಪರಿಕ್ಷೆಗೆ ಕಳುಹಿಸಲು ಪ್ರತ್ಯೇಕ ಪ್ರತ್ಯೇಕವಾಗಿ ಬಿಳಿ ,ಚೀಲದಲ್ಲಿ ಹಾಕಿ ದಾರದಿಂದ ಸುತ್ತಿ ಆರ್ ಎಂಬ ಅರಗಿನ ಸೀಲ್ ಮಾಡಲಾಯಿತು ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು ಸ್ಥಳದಲ್ಲೇ ಓದಿ ಸಹಿ ಮಾಡಿರಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಕೇಳಿಕೊಂಡ ನಿ.ಪಿ. 2 ರಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾಧಂ,**
**ನಂಜನಗೂಡು**